ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 05-07-2016

ರಾಮನಗರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 06.06.16 ರಿಂದ 10.07.16 ವರೆಗೆ)

ನಿಯತಾಂಕಗಳು	06.07.16	07.07.16	08.07.16	09.07.16	10.07.16
ಮಳೆ (ಮಿ ಮಿ)	3	3	4	2	2
ಗರಿಷ್ಠ ಉಷ್ಣಾಂಶ(ಡಿ.ಸೆ.)	27	28	28	28	28
ಕನಿಷ್ಠ ಉಷ್ಣಾಂಶ(ಡಿ.ಸೆ.)	21	21	20	20	20
ಮೋಡ (ಪ್ರಮಾಣ)	8	8	7	7	6
ಆರ್ದ್ರತೆ ೭.೨೦ ಬೆ (ಶೇ)	85	85	86	81	81
ಆರ್ದ್ರತೆ ೨.೨೦ ಮ (ಶೇ)	74	70	65	69	63
ಗಾಳಿಯ ವೇಗ(ಕಿ.ಮಿ/ಗಂಟೆಗೆ)	7	8	10	8	10
ಗಾಳಿಯ ದಿಕ್ಕು (ಡಿಗ್ರಿ)	230	230	250	230	240

ಮುಂಬರುವ 5 ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ. ದಿನದ ಗರಿಷ್ಠ ಉಷ್ಣಾಂಶ **27.0–28.0° ಸೆ** ಮತ್ತು ಕನಿಷ್ಠ **20.0–21.0° ಸೆ** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **81–86 %** ಇದ್ದು ಮಧ್ಯಾಹ್ನ **63–74 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **7–10** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ಮುಂಗಾರು ಬಿತ್ತನೆಯನ್ನು ತೇವಾಂಶದ ಆಧಾರದ ಮೇಲೆ ಮುಂದುವರಿಸಿ.
- ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ
- ಬಿತ್ತನೆಗೆ ಮೊದಲು ಸಾವಯವ ಗೊಬ್ಬರವನ್ನು ಭೂಮಿಗೆ ಸೇರಿಸುವುದು ಹಾಗು ಭೂಮಿಯನ್ನು ಮಟ್ಟಮಾಡಿ ಬಿತ್ತನೆಗೆ ಹದಮಾಡಿಕೊಳ್ಳುವುದು.
- ಉತ್ತಮ ಮಳೆಯ ಮುನ್ಸೂಚನೆ ಇರುವುದರಿಂದ ಖುಷ್ಕಿ ಜಮೀನಿನಲ್ಲಿ ಬದು ಮತ್ತು ಬಸಿಗಾಲುವೆಗಳನ್ನು ಸ್ವಚ್ಛ ಮಾಡುವುದು ಹಾಗು ಕೃಷಿ ಹೊಂಡಗಳನ್ನು ದುರಸ್ತಿಗೊಳಿಸಿ ನೀರು ನಿಧಾನವಾಗಿ ಹರಿಯುವಂತೆ ಮಾಡುವುದು ಮಣ್ಣಿನ ಸವಕಳಿ ತಪ್ಪಿಸಿ ಹಾಗು ಮಣ್ಣಿನ ಸಂರಕ್ಷಣೆ ಮಾಡುವ್ಯದು.
- ನೀರು ಬರಿದಾಗಿರುವ ಕೆರೆಗಳಲ್ಲಿ ಗೋಡು ಮಣ್ಣನ್ನು ತೆಗೆದು ಭೂಮಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು
- ಬಿತ್ತನೆಗೆ ಬೇಕಾಗುವ ಪರಿಕರಗಳ ಪೂರಕಗಳನ್ನು ಸಿದ್ಧತೆ ಮಾಡಿಕೊಳ್ಳಿ.
- ಮುಂಗಾರು ಬೆಳೆಗಳಾಗಿ ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ತೊಗರಿ : ಟಿ.ಟಿ.ಬಿ–7, ಬಿ.ಆರ್.ಜಿ–1,2,4ಮತ್ತು 5

  ಹರಳು: ಡಿ.ಸಿ.ಎಸ್–9 (ಜ್ಯೊತಿ), ಡಿ.ಸಿ.ಎಚ್–177 ಮತ್ತು 32

  ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಐ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ.

  ರಾಗಿ: ಇಂಡಾಫ್–9, ಎಳ್ಳು : ನವಿಲೆ–1, ಟಿ–7, ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1

  ಹೆಸರು :ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ
- ಶೇಂಗಾ ತಳಿಗಳಾದ ಜೆ ಎಲ್–24, ಟಿ.ಎಮ್.ವಿ–2 (ಬೀಜದ ಪ್ರಮಾಣ 50 ಕೆಜಿ ಪ್ರತಿ ಎಕರೆಗೆ) · ರೈಜೊಬಿಯಂ ಗೊಬ್ಬರ (2.5 ಕೆಜಿ ಪ್ರ. ಹೆ.) ಹಾಗೂ ರಂಜಕ ಕರಗಿಸುವ ಗೊಬ್ಬರ (2.5 ಕೆಜಿ ಪ್ರ. ಹೆ.). · ರಾಸಾಯನಿಕ ಗೊಬ್ಬರದ ಪ್ರಮಾಣ – 25 ಕೆಜಿ ಸಾರಜನಕ (55 ಕೆಜಿ ಯೂರಿಯ), 50 ಕೆಜಿ ರಂಜಕ (313 ಕೆಜಿ ಎಸ್.ಎಸ್.ಪಿ), 25 ಕೆಜಿ ಪೋಟ್ಯಾಷ್ (42 ಕೆಜಿ ಎಮ್.ಓ.ಪಿ), 25 ಕೆಜಿ ಸತುವಿನ ಸಲ್ಫೇಟ್ ಹಾಗೂ 25 ಕೆಜಿ ಕಬ್ಬಿಣದ ಸಲ್ಫೇಟ್. · ಮೂವತ್ತು (30) ಸೆಂ.ಮೀ ಅಂತರದ ಸಾಲುಗಳಲ್ಲಿ ಬೀಜದಿಂದ ಬೀಜಕ್ಕೆ 10 ಸೆಂ.ಮೀ. · ಕಳೆನಾಶಕ ಬಳಸಿ ಕಳೆಗಳ ಹತೋಟಿ ಮಾಡುವುದಾದಲ್ಲಿ ಬೀಜ ಬಿತ್ತಿದ ದಿನ ಅಥವಾ ಮರು ದಿನವೇ ಅಟ್ರಜೀನ್ 50 WP ಅನ್ನು 1 ಕಿ.ಗ್ರಾಂ /ಹೆ. 1000 ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು.

ಮಾವು:

- ಆಳವಾಗಿ ಉಳುಮೆ ಮಾಡುವುದರಿಂದ ಹುಳುಗಳ ವಿವಿಧ ಹಂತಗಳನ್ನು ನಾಶಪಡಿಸಬಹುದು.
- ಹಣ್ಣನ್ನು ಕಟಾವು ಮಾಡುವ ಸಮಯದಲ್ಲಿ ನೆಲಕ್ಕೆ ತಾಗದ ರೀತಿ ಎಚ್ಚರ ವಹಿಸಿ. ಇದರಿಂದ ಕಟಾವಿನ ನಂತರ ಶಿಲೀಂಧ್ರದಿಂದ ಬರುವ ಹಲವಾರು ರೋಗಗಳನ್ನು ತಡೆಯಬಹುದು.
- ಜಾನುವಾರು: ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.

ನೋಡಲ್ ಅಧಿಕಾರಿ:
ಕೃ.ವಿ.ವಿ, ಜಿ.ಕೆ.ವಿ.ಕೆ
ಬೆಂಗಳೂರು